All India Radio: Bangalore
National Bulletin In Kannada
27.11.2026 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
27.11.2026 19.35 hrs
<><><*><><><>

ಮುಖ್ಯಾಂಶಗಳು

೧. ಐಒಆರ್‌ಎ ಸದಸ್ಯ ರಾಷ್ಟ್ರಗಳ ವಿದೇಶಾಂಗ ಸಚಿವರನ್ನು ಭೇಟಿಯಾದ ಪ್ರಧಾನಿ; ಮಹಾಸಾಗರ ದೃಷ್ಟಿಕೋನದ ಬದ್ಧತೆ ಪುನರುಚ್ಚಾರ

೨. ಭಾರತ-ಐರೋಪ್ಯ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದ ಕುರಿತ ಮಾತುಕತೆ ಪೂರ್ಣ; ಡಿಸೆಂಬರ್ ೧೬ ರಂದು ಒಪ್ಪಂದಕ್ಕೆ ಸಹಿ ನಿರೀಕ್ಷೆ

೩. ವಿಕಸಿತ ಭಾರತ ನಿರ್ಮಾಣದಲ್ಲಿ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಪಾತ್ರ ಮಹತ್ವದ್ದು - ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ

೪. ಕಾರ್ತಿಕ ದೀಪ ಆದೇಶ ಉಲ್ಲಂಘನೆ; ತಮಿಳುನಾಡು ಮುಖ್ಯ ಕಾರ್ಯದರ್ಶಿ ಸೇರಿ ಹಲವರಿಗೆ ಸುಪ್ರೀಂ ಕೋರ್ಟ್ ನ್ಯಾಯಾಂಗ ನಿಂದನೆ ನೋಟಿಸ್

೫. ಮಹಿಳಾ ಏಷ್ಯನ್ ಹಾಕಿ ಚಾಂಪಿಯನ್ಸ್ ಟ್ರೋಫಿ; ಫೈನಲ್ ಪ್ರವೇಶಿಸಿದ ಚೀನಾ; ಭಾರತ-ಮಲೇಷ್ಯಾ ಸೆಮಿಫೈನಲ್ ಕದನ ಪ್ರಗತಿಯಲ್ಲಿ

<><><*><><><>

ನವದೆಹಲಿಯಲ್ಲಿ ನಡೆದ ಹಿಂದೂ ಮಹಾಸಾಗರದ ತೀರಪ್ರದೇಶದ ರಾಷ್ಟ್ರಗಳ ಸಂಘಟನೆ-ಐಒಆರ್‌ಎ, ೨೫ನೇ ಸಚಿವರ ಮಂಡಳಿ ಸಭೆಯಲ್ಲಿ ಭಾಗವಹಿಸಿದ್ದ ೨೩ ಸದಸ್ಯ ರಾಷ್ಟ್ರಗಳ ವಿದೇಶಾಂಗ ಸಚಿವರು ಮತ್ತು ನಿಯೋಗದ ಮುಖ್ಯಸ್ಥರನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಭೇಟಿಯಾದರು. ಸಾಮಾಜಿಕ ಮಾಧ್ಯಮದಲ್ಲಿ ಈ ಕುರಿತು ಸಂದೇಶ ಹಂಚಿಕೊಂಡಿರುವ ಪ್ರಧಾನಿ, ಹಿಂದೂ ಮಹಾಸಾಗರ ಶತಮಾನಗಳಿಂದ ಜನರನ್ನು ಬೆಸೆದಿದೆ ಎಂದು ಹೇಳಿದ್ದಾರೆ. ಐಒಆರ್‌ಎ ಅಧ್ಯಕ್ಷ ರಾಷ್ಟ್ರವಾಗಿ ಭಾರತ, ತನ್ನ 'ಮಹಾಸಾಗರ್' ದೂರದೃಷ್ಟಿಯನ್ನು ಮುನ್ನಡೆಸಲು ಹಾಗೂ ಹಿಂದೂ ಮಹಾಸಾಗರ ಪ್ರದೇಶದಲ್ಲಿ ಶಾಂತಿ, ಭದ್ರತೆ, ಸ್ಥಿರತೆ ಮತ್ತು ಸಮೃದ್ಧಿಯನ್ನು ಬಲಪಡಿಸಲು ಎಲ್ಲಾ ಪಾಲುದಾರರೊಂದಿಗೆ ನಿಕಟವಾಗಿ ಕೆಲಸ ಮಾಡಲು ಎದುರು ನೋಡುತ್ತಿದೆ ಎಂದು ತಿಳಿಸಿದ್ದಾರೆ.

<><><*><><><>

ನವದೆಹಲಿಯಲ್ಲಿಂದು ನಡೆದ ಹಿಂದೂ ಮಹಾಸಾಗರದ ತೀರಪ್ರದೇಶದ ರಾಷ್ಟ್ರಗಳ ಸಂಘಟನೆ-ಐಒಆರ್‌ಎ ನ ೨೫ನೇ ಸಚಿವರ ಮಂಡಳಿ ಸಭೆಯಲ್ಲಿ ಭಾರತದಲ್ಲಿನ ಅಮೆರಿಕ ರಾಯಭಾರಿ ಸರ್ಜಿಯೊ ಗೋರ್ ಪಾಲ್ಗೊಂಡರು.

೨೦೨೫-೨೦೨೬ನೇ ಸಾಲಿನ ಭಾರತದ ಐಒಆರ್‌ಎ ಅಧ್ಯಕ್ಷತೆಯಲ್ಲಿ 'ಹಿಂದೂ ಮಹಾಸಾಗರ ಪ್ರದೇಶದಲ್ಲಿ ನಾವೀನ್ಯತೆ, ಮುಕ್ತ ಸಂಚಾರ, ಸದೃಢತೆ ಮತ್ತು ಹೊಂದಾಣಿಕೆ' ಎಂಬ ಧ್ಯೇಯದೊಂದಿಗೆ ನಡೆದ ಈ ಸಭೆಯಲ್ಲಿ ಮಾರಿಷಸ್ ಮತ್ತು ಶ್ರೀಲಂಕಾ, ಭಾರತದ ನಾಯಕತ್ವವನ್ನು ಶ್ಲಾಘಿಸಿವೆ.

<>><><*><><<>

ಕೇರಳಂ ರಾಜ್ಯವು ಆಯುರ್ವೇದದ ಅಂತಾರಾಷ್ಟ್ರೀಯ ಖ್ಯಾತಿ ಹೆಚ್ಚಿಸುವುದಷ್ಟೇ ಅಲ್ಲದೆ, ಶಾಸ್ತ್ರೀಯ ಆಯುರ್ವೇದ ಅಧ್ಯಯನದ ಶ್ರೀಮಂತ ಪರಂಪರೆಯನ್ನು ಪೋಷಿಸಿಕೊಂಡು ಬಂದಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ಇಂದು ತ್ರಿಶೂರ್‌ನಲ್ಲಿ ವೈದ್ಯರತ್ನಂ ಆಯುರ್ವೇದ ಕಾಲೇಜಿನ ಸುವರ್ಣ ಮಹೋತ್ಸವದ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಅವರು, ಮಾತನಾಡಿದರು. ಈ ಪ್ರದೇಶದ ಅಷ್ಟವೈದ್ಯ ಕುಟುಂಬಗಳು ಅಷ್ಟಾಂಗ ಹೃದಯಂ ಮತ್ತು ಶಾಸ್ತ್ರೀಯ ಆಯುರ್ವೇದದ ಬೋಧನೆಗಳನ್ನು ಅಧ್ಯಯನ ಮಾಡುವುದು, ಅರ್ಥೈಸಿಕೊಳ್ಳುವುದು ಹಾಗೂ ಆಚರಣೆಗೆ ತರುವಲ್ಲಿ ಶ್ರೀಮಂತ ಪರಂಪರೆಯನ್ನು ಬೆಳೆಸಿವೆ. ಈ ಪರಂಪರೆಯಲ್ಲಿ ಸಂರಕ್ಷಿಸಲಾಗಿರುವ ಗ್ರಂಥಗಳು, ಹಸ್ತಪ್ರತಿಗಳು, ಚಿಕಿತ್ಸಾ ವಿಧಾನಗಳು ಮತ್ತು ಪ್ರಾಯೋಗಿಕ ಜ್ಞಾನವನ್ನು ವ್ಯವಸ್ಥಿತವಾಗಿ ದಾಖಲಿಸುವುದು ರಾಷ್ಟ್ರೀಯ ಮಹತ್ವದ ಕಾರ್ಯವಾಗಿದೆ ಎಂದು ರಾಷ್ಟ್ರಪತಿಗಳು ಹೇಳಿದರು.

<>><><*><><<>

ಭಾರತ ಮತ್ತು ಐರೋಪ್ಯ ಒಕ್ಕೂಟದ ನಡುವಿನ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಮುಂದಿನ ತಿಂಗಳ ೧೪ರಂದು ಪ್ರಧಾನಿ ನರೇಂದ್ರ ಮೋದಿ ಅವರ ಬ್ರಸೆಲ್ಸ್ ಭೇಟಿಯ ಸಂದರ್ಭದಲ್ಲಿ ಅಧಿಕೃತವಾಗಿ ಸಹಿ ಹಾಕಲಾಗುವುದು ಎಂದು ಭಾರತದಲ್ಲಿನ ಐರೋಪ್ಯ ಒಕ್ಕೂಟದ ರಾಯಭಾರಿ ಜೀನ್ ಎರಿಕ್ ಪಾಕೆಟ್ ತಿಳಿಸಿದ್ದಾರೆ. ಸುದ್ದಿಸಂಸ್ಥೆಯೊಂದಕ್ಕೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಅವರು, ಒಪ್ಪಂದದ ಕುರಿತ ಮಾತುಕತೆಗಳು ಪೂರ್ಣಗೊಂಡಿದ್ದು, ಸಹಿ ಹಾಕಲು ಒಪ್ಪಂದ ಸಿದ್ಧವಾಗಿದೆ. ಸಹಿ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಒಪ್ಪಂದವು ಐರೋಪ್ಯ ಸಂಸತ್ತಿನ ಪರಿಶೀಲನೆ ಮತ್ತು ಅನುಮೋದನೆಗೆ ಒಳಪಡಲಿದೆ ಎಂದು ತಿಳಿಸಿದ್ದಾರೆ. ೨೦೨೫ರಲ್ಲಿ ಭಾರತ ಮತ್ತು ಐರೋಪ್ಯ ಒಕ್ಕೂಟದ ನಡುವಿನ ಸರಕು ವ್ಯಾಪಾರ ವಹಿವಾಟು ೧೧೮ ಶತಕೋಟಿ ಯುರೋಗಳಷ್ಟಿತ್ತು. ಸುಂಕಗಳನ್ನು ರದ್ದುಗೊಳಿಸಿದ ಬಳಿಕ ದ್ವಿಪಕ್ಷೀಯ ವ್ಯಾಪಾರದಲ್ಲಿ ಗಣನೀಯ ವಿಸ್ತರಣೆಯಾಗುವ ನಿರೀಕ್ಷೆಯಿದೆ ಎಂದು ಅವರು ಹೇಳಿದ್ದಾರೆ.

<>><><*><><<>

ಸೋಮವಾರದಿಂದ ಆರಂಭವಾಗಲಿರುವ ಲೋಕಸಭೆಯ ನಾಲ್ಕು ದಿನಗಳ ಅಧಿವೇಶನದಲ್ಲಿ ಕೇಂದ್ರ ಸರ್ಕಾರ ಮಹತ್ವದ ಶಾಸಕಾಂಗ ಕಲಾಪಗಳನ್ನು ಕೈಗೆತ್ತಿಕೊಳ್ಳಲಿದೆ ಎಂದು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ತಿಳಿಸಿದ್ದಾರೆ. ನವದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಈ ಮಸೂದೆಗಳನ್ನು ಡಿಸೆಂಬರ್ ೨ರಿಂದ ಆರಂಭವಾಗಲಿರುವ ರಾಜ್ಯಸಭೆಯ ಅಧಿವೇಶನದಲ್ಲೂ ಮಂಡಿಸಲಾಗುವುದು ಎಂದು ಹೇಳಿದರು. ಈ ಕುರಿತು ಪ್ರಮುಖ ರಾಜಕೀಯ ಪಕ್ಷಗಳ ನಾಯಕರೊಂದಿಗೆ ಈಗಾಗಲೇ ಚರ್ಚೆ ನಡೆಸಿರುವುದಾಗಿ ತಿಳಿಸಿದ ಸಚಿವರು, ಮಂಡನೆಯಾಗಲಿರುವ ಮಸೂದೆಗಳ ಮೇಲಿನ ಚರ್ಚೆಯಲ್ಲಿ ಎಲ್ಲಾ ರಾಜಕೀಯ ಪಕ್ಷಗಳ ನಾಯಕರು ಮತ್ತು ಸಂಸದರು ಸಂಪೂರ್ಣವಾಗಿ ತೊಡಗಿಸಿಕೊಳ್ಳುವಂತೆ ಮನವಿ ಮಾಡಿದ್ದಾರೆ.

<>><><*><><<>

ಕಳೆದ ಕೆಲವು ವರ್ಷಗಳಲ್ಲಿ ಔಷಧಿಗಳನ್ನು ಕೈಗೆಟಕುವ ದರದಲ್ಲಿ ಲಭ್ಯವಾಗುವಂತೆ ಮಾಡಲು ಕೇಂದ್ರ ಸರ್ಕಾರ ಹಲವಾರು ಕ್ರಮ ಕೈಗೊಂಡಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿರುವ ಬಿಜಿಎಸ್ ಸಂಸ್ಥೆಯ ಒಂದು ಸಾವಿರ ಹಾಸಿಗೆ ಸಾಮರ್ಥ್ಯದ ಅತ್ಯಾಧುನಿಕ ಬಿಜಿಎಸ್ ಜಿಮ್ಸ್ ಆಸ್ಪತ್ರೆಯನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಅಮೃತ್ ಫಾರ್ಮಸಿ ಮಳಿಗೆಗಳ ಮೂಲಕ ಜೀವರಕ್ಷಕ ಔಷಧಿಗಳನ್ನು ಶೇಕಡ ೫೦ ರಿಂದ ೯೦ರಷ್ಟು ರಿಯಾಯಿತಿಯಲ್ಲಿ ದೇಶಾದ್ಯಂತ ಒದಗಿಸಲಾಗುತ್ತಿದೆ ಎಂದು ಹೇಳಿದ್ದಾರೆ. ಭಾರತವು ೨೦೨೩ರಲ್ಲಿ ಕಾರ್-ಟಿ ಸೆಲ್ ಥೆರಪಿಯಂತಹ ಅತ್ಯಾಧುನಿಕ ಕ್ಯಾನ್ಸರ್ ಚಿಕಿತ್ಸಾ ವಿಧಾನವನ್ನು ಅಭಿವೃದ್ಧಿಪಡಿಸಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ. ಭಾರತಕ್ಕೆ ಪ್ರಾಚೀನ ಕಾಲದಿಂದಲೂ ವೈದ್ಯಕೀಯ ಕ್ಷೇತ್ರದಲ್ಲಿ ಶ್ರೀಮಂತ ಪರಂಪರೆಯಿದೆ ಎಂದು ಪ್ರತಿಪಾದಿಸಿದ ಅವರು, ಆಯುಷ್ಮಾನ್ ಭಾರತ್ ಡಿಜಿಟಲ್ ಮಿಷನ್ ಅಡಿಯಲ್ಲಿ ಆರೋಗ್ಯ ಸೇವೆಗಳ ಡಿಜಿಟಲೀಕರಣವು ವ್ಯಾಪಕವಾಗಿ ವಿಸ್ತರಿಸುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<>><><*><><<>

ಕೇವಲ ಬೃಹತ್ ಕಂಪನಿಗಳಿಂದ ಮಾತ್ರ ವಿಕಸಿತ ಭಾರತವನ್ನು ನಿರ್ಮಿಸಲು ಸಾಧ್ಯವಿಲ್ಲ, ಬದಲಾಗಿ ಉತ್ಪಾದನಾ ಕಾರ್ಯಾಗಾರಗಳು, ಪೂರಕ ಸರಬರಾಜುದಾರರು ಮತ್ತು ಸೇವಾ ಪೂರೈಕೆದಾರರಂತಹ ಸಣ್ಣ ಉದ್ಯಮಗಳೂ ದೇಶದ ಅಭಿವೃದ್ಧಿಯನ್ನು ಅಷ್ಟೇ ಪ್ರಮಾಣದಲ್ಲಿ ರೂಪಿಸಲಿವೆ ಎಂದು ಭಾರತೀಯ ರಿಸರ್ವ್ ಬ್ಯಾಂಕ್-ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಹೇಳಿದ್ದಾರೆ. ಮುಂಬೈನಲ್ಲಿ ನಡೆದ ಎಸ್‌ಎಂಇ ಹಣಕಾಸು ಮತ್ತು ಹೂಡಿಕೆ ಶೃಂಗಸಭೆ'ಯನ್ನು ಉದ್ದೇಶಿಸಿ ಮಾತನಾಡಿದ ಅವರು, ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಉದ್ಯಮಗಳು ಭಾರತೀಯ ಆರ್ಥಿಕತೆಯ ಪ್ರಮುಖ ಭಾಗವಾಗಿದ್ದು, ದೇಶದ ಜಿಡಿಪಿಗೆ ಸುಮಾರು ಶೇಕಡಾ ೩೧ರಷ್ಟು, ಉತ್ಪಾದನಾ ವಲಯಕ್ಕೆ ಶೇಕಡಾ ೩೫ರಷ್ಟು ಮತ್ತು ಸರಕುಗಳ ರಫ್ತಿಗೆ ಸುಮಾರು ಅರ್ಧದಷ್ಟು ಕೊಡುಗೆ ನೀಡುತ್ತಿವೆ ಎಂದರು.

<>><><*><><<>

ಕಾರ್ತಿಕ ದೀಪ ಬೆಳಗಿಸುವ ಕುರಿತ ತನ್ನ ಆದೇಶವನ್ನು ಉಲ್ಲಂಘಿಸಿದ ಹಿನ್ನೆಲೆಯಲ್ಲಿ ಸುಪ್ರೀಂ ಕೋರ್ಟ್ ಇಂದು ತಮಿಳುನಾಡು ಮುಖ್ಯ ಕಾರ್ಯದರ್ಶಿ, ಪೊಲೀಸ್ ಮಹಾನಿರ್ದೇಶಕ, ಮಧುರೈ ಜಿಲ್ಲಾಧಿಕಾರಿ ಮತ್ತು ಇತರ ಅಧಿಕಾರಿಗಳಿಗೆ ನ್ಯಾಯಾಂಗ ನಿಂದನೆ ನೋಟಿಸ್ ಜಾರಿಗೊಳಿಸಿದೆ. ಅರುಳ್ಮಿಗು ಸುಬ್ರಹ್ಮಣ್ಯಸ್ವಾಮಿ ದೇವಸ್ಥಾನದ ಟ್ರಸ್ಟಿಗಳ ಮಂಡಳಿಯನ್ನು ಅಮಾನತುಗೊಳಿಸಿರುವ ಸರ್ವೋಚ್ಚ ನ್ಯಾಯಾಲಯ, ನಾಳೆ ಉಚ್ಚಿಪಿಳ್ಳಯಾರ್ ಮಂಟಪದಲ್ಲಿ ಬೆಳಗಿಸಿದ ಜ್ಯೋತಿಯನ್ನು ಬಳಸಿ ತಿರುಪರಂಕುಂದ್ರಂ ಬೆಟ್ಟದ ದೀಪತೂಣ್‌ನಲ್ಲಿ ದೀಪ ಬೆಳಗಿಸುವಂತೆ ಆದೇಶಿಸಿದೆ. ನ್ಯಾಯಮೂರ್ತಿ ಅರವಿಂದ್ ಕುಮಾರ್ ಮತ್ತು ನ್ಯಾಯಮೂರ್ತಿ ವಿಪುಲ್ ಎಂ. ಪಾಂಚೋಲಿ ಅವರನ್ನೊಳಗೊಂಡ ಪೀಠ, ತಮಿಳುನಾಡು ಮುಖ್ಯ ಕಾರ್ಯದರ್ಶಿಯವರಿಗೆ ಖುದ್ದು ಹಾಜರಾಗುವಂತೆ ಸೂಚಿಸಿದ್ದು, ಅಧಿಕಾರಿಗಳ ನಡುವೆ ವಿನಿಮಯವಾದ ಇಮೇಲ್‌ಗಳು, ದೂರವಾಣಿ ಕರೆಗಳು ಮತ್ತು ಸಂದೇಶಗಳ ವಿವರಗಳನ್ನು ಒಳಗೊಂಡ ಅಫಿಡವಿಟ್ ಸಲ್ಲಿಸುವಂತೆ ನಿರ್ದೇಶಿಸಿದೆ.

ತನ್ನ ಆದೇಶಗಳನ್ನು ಜಾರಿಗೊಳಿಸುವಲ್ಲಿ ತಮಿಳುನಾಡು ಪೊಲೀಸರು ವಿಫಲರಾಗಿದ್ದಾರೆ ಎಂದು ಉಲ್ಲೇಖಿಸಿರುವ ಸುಪ್ರೀಂ ಕೋರ್ಟ್, ಅರುಳ್ಮಿಗು ಸುಬ್ರಹ್ಮಣ್ಯಸ್ವಾಮಿ ದೇವಸ್ಥಾನ ಮತ್ತು ತಿರುಪರಂಕುಂಡ್ರಂ ಬೆಟ್ಟದ ಭದ್ರತೆಯನ್ನು ಕೇಂದ್ರ ಮೀಸಲು ಪೊಲೀಸ್ ಪಡೆ -ಸಿಆರ್‌ಪಿಎಫ್‌ಗೆ ಹಸ್ತಾಂತರಿಸಿದೆ.

<>><><*><><<>

ಯಾವುದೇ ಪೂರ್ವನಿರ್ಧರಿತ ಮಾನದಂಡ ಅಥವಾ ಲಿಖಿತ ಅಂಕಪಟ್ಟಿ ಇಲ್ಲದೆ, ಬಹುತೇಕ ಒಮ್ಮತದ ಮೂಲಕವೇ ಚಲನಚಿತ್ರಗಳನ್ನು ಆಯ್ಕೆ ಮಾಡಿರುವುದಾಗಿ ೫೭ನೇ ಭಾರತೀಯ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ - ಐಎಫ್‌ಎಫ್‌ಐ ಯ ಅಂತಾರಾಷ್ಟ್ರೀಯ ಸ್ಪರ್ಧಾ ವಿಭಾಗದ ತೀರ್ಪುಗಾರರ ಮಂಡಳಿ ತಿಳಿಸಿದೆ. ಗೋವಾದಲ್ಲಿಂದು ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ತೀರ್ಪುಗಾರರ ಮಂಡಳಿ ಅಧ್ಯಕ್ಷ ಆನಂದ್ ರೈ ಮತ್ತು ನಾಲ್ವರು ಅಂತಾರಾಷ್ಟ್ರೀಯ ಸದಸ್ಯರು, ಪ್ರತಿ ಚಿತ್ರದ ನಂತರ ಮುಕ್ತ ಚರ್ಚೆಯ ಮೂಲಕ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಹೇಳಿದರು. ಈ ಬಾರಿ ಪ್ರತಿಷ್ಠಿತ 'ಗೋಲ್ಡನ್ ಪೀಕಾಕ್' ಪ್ರಶಸ್ತಿಗಾಗಿ ೧೫ ಚಿತ್ರಗಳು ಸ್ಪರ್ಧಿಸುತ್ತಿವೆ. ಮಂಡಳಿಯು, ಯಾವುದೇ ಪೂರ್ವಾಗ್ರಹವಿಲ್ಲದೆ, ಅರ್ಥಪೂರ್ಣ ಚರ್ಚೆಗಳನ್ನು ನಡೆಸಿತು ಎಂದ ಆನಂದ್ ರೈ, ಭಾಷೆಗಿಂತ ಹೆಚ್ಚಾಗಿ ನಿರ್ಮಾಪಕರೇ ಸಿನಿಮಾದ ವ್ಯಾಕರಣವನ್ನು ರೂಪಿಸುತ್ತಾರೆ ಎಂದು ಅಭಿಪ್ರಾಯಪಟ್ಟರು.

<>><><*><><<>

ಭೋಪಾಲ್‌ನಲ್ಲಿ ನಡೆಯುತ್ತಿರುವ ಮಹಿಳಾ ಏಷ್ಯನ್ ಹಾಕಿ ಚಾಂಪಿಯನ್ಸ್ ಟ್ರೋಫಿಯ ಮೊದಲ ಸೆಮಿಫೈನಲ್‌ನಲ್ಲಿ ಜಪಾನ್ ತಂಡವನ್ನು ೧-೦ ಗೋಲುಗಳಿಂದ ಮಣಿಸಿದ ಚೀನಾ ಫೈನಲ್ ಪ್ರವೇಶಿಸಿದೆ. ಪ್ರಶಸ್ತಿಗಾಗಿ ಚೀನಾ ತಂಡವು ಎರಡನೇ ಸೆಮಿಫೈನಲ್ ವಿಜೇತರನ್ನು ಎದುರಿಸಲಿದೆ. ಭೋಪಾಲ್‌ನ ನಾಥು ಬರ್ಖೇಡಾದಲ್ಲಿರುವ ಅಂತಾರಾಷ್ಟ್ರೀಯ ಕ್ರೀಡಾ ಸಂಕೀರ್ಣದಲ್ಲಿ ಇಂದು ಆತಿಥೇಯ ಹಾಗೂ ಹಾಲಿ ಚಾಂಪಿಯನ್ ಭಾರತ ತಂಡ ಮತ್ತು ಮಲೇಷ್ಯಾ ನಡುವಿನ ಎರಡನೇ ಸೆಮಿಫೈನಲ್ ಪಂದ್ಯ ಪ್ರಸ್ತುತ ಪ್ರಗತಿಯಲ್ಲಿದ್ದು, ಭಾರತ ತಂಡ, ಗೆಲುವು ಸಾಧಿಸಿ ಫೈನಲ್‌ಗೆ ಲಗ್ಗೆ ಇಡುವ ಗುರಿ ಹೊಂದಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>